# ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಮಂಜುನಾಥ ಭಂಡಾರಿ ಇವರು ನಿಯಮ-72ರ ಮೇರೆಗೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

***

**ವಿಷಯ:** ತ್ರಿಸ್ತರ ಪಂಚಾಯತಿಗಳು ಪಂಚಾಯತ್ ರಾಜ್ ವ್ಯವಸ್ಥೆಯ ಬುನಾದಿಯಾಗಿದ್ದು, ಗ್ರಾಮೀಣಾಭಿವೃದ್ಧಿಯಲ್ಲಿ ತಮ್ಮದೇ ಕೊಡುಗೆ ನೀಡುತ್ತಿವೆ. ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 ರ ಪ್ರಕಾರ 26 ಉಪಬಂಧಗಳನ್ವಯ ವಿವಿದ ಇಲಾಖೆಗಳ ಅಭಿವೃದ್ಧಿ ಕಾರ್ಯಕ್ರಮ ಅನುಷ್ಠಾನದ ನಿಯಂತ್ರಣ ಮತ್ತು ಮೇಲ್ವಿಚಾರಣೆಯನ್ನು ಅನುಸೂಚಿ 1, 2 ಹಾಗೂ 3 ರ ಮೂಲಕ ಅಧಿಸೂಚಿಸಲಾಗಿದೆ. ಈ ಪ್ರಕಾರ 28 ಇಲಾಖೆಗಳಲ್ಲಿ 3 ಇಲಾಖೆಗಳ ಜವಾಬ್ದಾರಿ ನಕ್ಷೆಯನ್ನು ಈಗಾಗಲೇ ಆದೇಶದ ಮೂಲಕ ಜಾರಿಗೆ ತರಲಾಗಿದೆ.

ಆದರೆ ಜವಾಬ್ದಾರಿ ನಕ್ಷೆಯಂತೆ ಜವಾಬ್ದಾರಿ ನಿಭಾಯಿಸಬೇಕಾದ ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ ಹಾಗೂ ಜಿಲ್ಲಾ ಪಂಚಾಯತಿಗಳಲ್ಲಿ ಚುನಾಯಿತ ಜನಪ್ರತಿನಿಧಿಗಳಿಲ್ಲದಿರುವುದು ಆಡಳಿತಕ್ಕೆ ಹಿನ್ನೆಡೆಯಾಗಿದೆ. ಅಭಿವೃದ್ಧಿ ಹಿತಾದೃಷ್ಠಿಯಿಂದ ಸುಗ್ರೀವಾಜ್ಞೆ ಮೂಲಕ ಕಾನೂನಿಗೆ ತಿದ್ದುಪಡಿ ತಂದು ಗ್ರಾಮ ಪಂಚಾಯತಿಗಳಿಗೂ ವಾರ್ಡ್‌ಗೊಬ್ಬ ಸದಸ್ಯರಂತೆ, ಪಕ್ಷದ ಚಿಹ್ನೆಯಡಿ ಚುನಾವಣೆ ನಡೆಸಬೇಕಾಗಿದೆ. ಎಲ್ಲಾ ಹಂತದ ಸ್ಥಳೀಯ ಸಂಸ್ಥೆ ಸದಸ್ಯರ ಗೌರವಧನವನ್ನು ಕೇರಳ ಮಾದರಿಯಲ್ಲಿ ಹೆಚ್ಚಿಸುವುದರ ಜೊತೆಗೆ ಗ್ರಾಮ ಪಂಚಾಯತಿಗಳ ಸಿಬ್ಬಂದಿಗಳಿಗೆ ಸಿ ಮತ್ತು ಡಿ ದರ್ಜೆಯ ಸ್ಥಾನಮಾನ ನೀಡಿ ಇತರೆ ಸರ್ಕಾರಿ ಸೌಲಭ್ಯಗಳನ್ನು ಒದಗಿಸಬೇಕಾಗಿದೆ.

ನಮ್ಮ ಸಂವಿಧಾನವು ಸ್ಥಳೀಯ ಸರ್ಕಾರಗಳಿಗೆ ಅಗತ್ಯ ಸಂಪನ್ಮೂಲ ಹಾಗೂ ಅಧಿಕಾರಗಳನ್ನು ಸಂಬಂಧಿಸಿದ ರಾಜ್ಯಗಳು ವರ್ಗಾಯಿಸಬೇಕೆಂದಿದೆ. ಆದ್ದರಿಂದ ಸ್ಥಳೀಯ ಸಂಸ್ಥೆಗಳನ್ನು ಬಲಪಡಿಸಲು ಆಡಳಿತಾತ್ಮಕ ಮತ್ತು ತಾಂತ್ರಿಕ ತೊಂದರೆಗಳನ್ನು ಕೂಡಲೇ ನಿವಾರಿಸಿ ಏಕ ಕಾಲದಲ್ಲಿ, ಎಲ್ಲಾ ಹಂತದ ಸ್ಥಳೀಯ ಸಂಸ್ಥೆಗಳ 5 ವರ್ಷದ ಅವಧಿ ಮುಗಿದ ತಕ್ಷಣ ಚುನಾವಣೆ ನಡೆಸಲು, ಚುನಾವಣಾ ಆಯೋಗಕ್ಕೆ ಅನುಕೂಲವಾಗುವಂತೆ ಕಾನೂನಿಗೆ ಸೂಕ್ತ ತಿದ್ದುಪಡಿ ತರುವ ಅವಶ್ಯಕತೆ ಬಗ್ಗೆ.

******

**ಉತ್ತರ: 1) ಜವಾಬ್ದಾರಿ ನಕ್ಷೆ.**

1) ಅಧಿಕಾರ ವಿಕೇಂದ್ರಿಕರಣ ತತ್ವದಡಿ 3 ಹಂತದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಅಧಿಕಾರ ವಿಕೇಂದ್ರಿಕರಣಗೊಳಿಸುವ ಉದ್ದೇಶದಿಂದ ಸಂವಿಧಾನದ 73 ನೇ ತಿದ್ದುಪಡಿ ಅನುಸಾರ ರಾಜ್ಯದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ಅನ್ನು ದಿನಾಂಕ: 10-05-1993 ರಿಂದ ಜಾರಿಗೊಳಿಸಲಾಗಿರುತ್ತದೆ.

ಈ ಅಧಿನಿಯಮದನ್ವಯ ರಚಿಸಲಾಗಿರುವ ಗ್ರಾಮ ಪಂಚಾಯತಿಗಳು, ತಾಲ್ಲೂಕು ಪಂಚಾಯತಿಗಳು ಮತ್ತು ಜಿಲ್ಲಾ ಪಂಚಾಯತಿಗಳು ಸ್ಥಳೀಯ ಸ್ವಯಂ ಆಡಳಿತ ಸಂಸ್ಥೆಗಳಾಗಿ ಕಾರ್ಯನಿರ್ವಹಿಸಬೇಕೆಂಬುದು ಅಧಿನಿಯಮದ ಆಶಯವಾಗಿರುತ್ತದೆ.

2) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 240 ರ ಉಪಬಂಧನ್‌ವಯ ರಾಜ್ಯ ಸರ್ಕಾರ ವಿವಿಧ ಅಭಿವೃದ್ಧಿ ಇಲಾಖೆಗಳ ಕಾರ್ಯಕ್ರಮಗಳ ಅನುಷ್ಠಾನದ ನಿಯಂತ್ರಣ ಹಾಗೂ ಮೇಲ್ವಿಚಾರಣೆಯನ್ನು ಸರ್ಕಾರ ಈಗಾಗಲೇ ಅಧಿನಿಯಮದ ಅನುಸೂಚಿ-I, ಅನುಸೂಚಿ-II ಮತ್ತು ಅನುಸೂಚಿ-III ರಲ್ಲಿ ಅಧಿಸೂಚಿಸಿದೆ.

3) ಅಭಿವೃದ್ಧಿ ಯೋಜನೆಗಳನ್ನು ಮತ್ತು ಆಯವ್ಯಯ ದಸ್ತಾವೇಜಿನೊಂದಿಗೆ ಹಾಜರುಪಡಿಸಬೇಕಾದ ವಾರ್ಷಿಕ ಹಣಕಾಸು ಪುನರಾವಲೋಕನೆಯನ್ನು ರೂಪಿಸುವುದಕ್ಕೆ ಸರ್ಕಾರವನ್ನು ಸಮರ್ಥಗೊಳಿಸುವುದಕ್ಕೆ ಕರ್ನಾಟಕ ರಾಜ್ಯ ವಿಕೇಂದ್ರಿಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯನ್ನು ರಚಿಸಲಾಗಿದೆ.

4) ಮಾನ್ಯ ಮುಖ್ಯಮಂತ್ರಿಗಳು 2023-24ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ,1993ರ ಪ್ರಕರಣ 2(28-ಸಿ) ರಡಿ ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳು ಹೊಂದಿರಬಹುದಾದ ಜವಾಬ್ದಾರಿಗಳ ವಿವರವಾದ ಪಟ್ಟಿಯೊಂದಿಗೆ ಜವಾಬ್ದಾರಿ ನಕ್ಷೆ ಸಿದ್ಧಪಡಿಸಲು ಕ್ರಮ ವಹಿಸಲಾಗಿದೆ.

5) ಪ್ರಸ್ತುತ 1. ಆರೋಗ್ಯ ಮತ್ತು ಕುಟುಂಬ ಕಲ್ಯಾಣ, 2. ಪರಿಶಿಷ್ಟ ಪಂಗಡಗಳ ಕಲ್ಯಾಣ, 3. ಕೃಷಿ, 4. ಸಮಾಜ ಕಲ್ಯಾಣ, 5. ಹಿಂದುಳಿದ ವರ್ಗಗಳ ಕಲ್ಯಾಣ, 6. ಅಲ್ಪಸಂಖ್ಯಾಂತರ ಕಲ್ಯಾಣ, ಹಜ್ ಮತ್ತು ವಕ್ಫ್, 7. ರೇಷ್ಮೆ, 8. ಜಲಾನಯನ, 9. ಮೀನುಗಾರಿಕೆ 10. ತೋಟಗಾರಿಕೆ 11. ಇಂಧನ ಮತ್ತು 12. ಪಶುಪಾಲನಾ ಮತ್ತು ಪಶುವೈದ್ಯಕೀಯ ಇಲಾಖೆಗಳಿಗೆ ಸಂಬಂಧಿಸಿದಂತೆ ಜವಾಬ್ದಾರಿ ನಕ್ಷೆಯನ್ನು ಸಿದ್ಧಪಡಿಸಿ ಅಧಿಸೂಚಿಸಲಾಗಿರುತ್ತದೆ. ಇನ್ನುಳಿದ ಇಲಾಖೆಗಳಿಗೆ ಜವಾಬ್ದಾರಿ ನಕ್ಷೆಯನ್ನು ಸಿದ್ಧಪಡಿಸಲು ಕ್ರಮ ವಹಿಸಲಾಗುತ್ತಿದೆ.

6) ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿ ಹಾಗೂ ತಾಲ್ಲೂಕು ಪಂಚಾಯತಿಗಳಿಗೆ ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪಂರಾ 212 ಜಿಪಸ 2021, ದಿನಾಂಕ:26.04.2021ರಲ್ಲಿ ಆಡಳಿತ ಅಧಿಕಾರಿಯನ್ನು ನೇಮಿಸಲಾಗಿದ್ದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 239ರಲ್ಲಿನ ಉಪಬಂಧದನ್ವಯ ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿಗಳ ಆಡಳಿತಾಧಿಕಾರಿಗಳು ಎಲ್ಲಾ ಪ್ರಕಾರ್ಯಗಳು ಮತ್ತು ಜವಾಬ್ದಾರಿಗಳನ್ನು ನಿರ್ವಹಿಸಲು ಅಧಿಕಾರ ಹೊಂದಿರುತ್ತಾರೆ.

7) ಅಧಿನಿಯಮದ ಪ್ರಕರಣ 8 ರ ಉಪಬಂಧಗಳನುಸಾರ ಗ್ರಾಮ ಪಂಚಾಯಿತಿಗಳ ಅವಧಿ ಮುಕ್ತಾಯಗೊಂಡ ನಂತರ ಆಡಳಿತಾಧಿಕಾರಿಗಳನ್ನು ನೇಮಿಸಿ ಅಧಿಸೂಚಿಸುವಂತೆ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪಂ 1003 ಗ್ರಾಪಂಅ 2025, ದಿನಾಂಕ:16.01.2026ರಂದು ನಿರ್ದೇಶನ ನೀಡಲಾಗಿದೆ. ಅದರಂತೆ ನೇಮಕಗೊಂಡ ಆಡಳಿತಾಧಿಕಾರಿಗಳು ಗ್ರಾಮ ಪಂಚಾಯತಿಯ ಎಲ್ಲಾ ಅಧಿಕಾರಿಗಳನ್ನು ಮತ್ತು ಕರ್ತವ್ಯಗಳನ್ನು ನಿರ್ವಹಿಸುತ್ತಾರೆ.

**2) ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿ ಚುನಾವಣೆ.**

1) ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯಿತಿಗಳ ಅವಧಿಯು ಜೂನ್ 2021ಕ್ಕೆ ಮುಕ್ತಾಯಗೊಂಡಿರುತ್ತದೆ. ಅವಧಿಯು ಮುಗಿದ ನಂತರ ಚುನಾವಣೆಯನ್ನು ನಡೆಸುವ ಸಿದ್ಧತೆಯಲ್ಲಿದ್ದಾಗ ರಾಜ್ಯದಲ್ಲಿ ಕೋವಿಡ್ ಸಾಂಕ್ರಾಮಿಕ ರೋಗ ಹಿನ್ನೆಲೆಯಲ್ಲಿ ಚುನಾವಣೆ ನಡೆಸಲು ಸಾಧ್ಯವಾಗಲಿಲ್ಲ.

2) 2021 ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ಕ್ಕೆ ತಿದ್ದುಪಡಿ ತಂದು ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವನ್ನು ರಚಿಸಲಾಗಿತ್ತು. ಆಯೋಗವು ನೀಡಿದ ಶಿಫಾರಸ್ಸಿನಂತೆ ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿಯ ಸೀಮಾ ಗಡಿಯನ್ನು ಗುರುತಿಸಿ ಅಧಿಸೂಚಿಸಲಾಗಿತ್ತು.

3) ಕೆಲವು ಗ್ರಾಮ ಪಂಚಾಯತಿಗಳು ಪಟ್ಟಣ ಪಂಚಾಯತಿ / ಪುರಸಭೆ/ನಗರ ಸಭೆಗಳಾಗಿ ಪರಿವರ್ತನೆ ಯಾಗಿರುವುದರಿಂದ, ಸಂಬಂಧಿಸಿದ ಜಿಲ್ಲಾ ಪಂಚಾಯತಿ ಹಾಗೂ ತಾಲ್ಲೂಕು ಪಂಚಾಯತಿಗಳ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳ ವ್ಯಾಪ್ತಿಯಿಂದ ಕೈ ಬಿಡಲು ಅಧಿಸೂಚನೆ ಹೊರಡಿಸಿ, ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿಗಳ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿಗಳನ್ನು ನಿಗಧಿ ಮಾಡಲಾಗಿದೆ.

4) ನಗರಾಭಿವೃದ್ಧಿ ಇಲಾಖೆಯು ಡಿಸೆಂಬರ್-2025 ರಲ್ಲಿ ಕೆಲವು ಗ್ರಾಮ ಪಂಚಾಯತಿಗಳನ್ನು ಪಟ್ಟಣ ಪಂಚಾಯತಿ / ಪುರಸಭೆ / ನಗರ ಸಭೆಗಳಾಗಿ ಪರಿವರ್ತನೆ ಮಾಡಿದ್ದು, ಸಂಬಂಧಿಸಿದ ಜಿಲ್ಲಾ ಪಂಚಾಯತಿ ಹಾಗೂ ತಾಲ್ಲೂಕು ಪಂಚಾಯತಿಗಳ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳ ವ್ಯಾಪ್ತಿಯಿಂದ ಕೈ ಬಿಡಲು ಅಧಿಸೂಚನೆ ಹೊರಡಿಸಿ, ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿಗಳ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿಗಳನ್ನು ನಿಗಧಿ ಮಾಡಲಾಗಿದೆ.

5) ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿ ಕ್ಷೇತ್ರಗಳಿಗೆ ಮೀಸಲಾತಿ ಪ್ರಕ್ರಿಯೆಯು ಚಾಲ್ತಿಯಲ್ಲಿದ್ದು, ಪ್ರಕ್ರಿಯೆ ಪೂರ್ಣಗೊಂಡ ನಂತರ ಚುನಾವಣೆ ನಡೆಸಲಾಗುವುದು.

## 3) ಗ್ರಾಮ ಪಂಚಾಯತಿಗಳ ಚುನಾವಣೆ.

1) ರಾಜ್ಯದ ಗ್ರಾಮ ಪಂಚಾಯತಿಗಳಿಗೆ ಡಿಸೆಂಬರ್ 2020 ರಲ್ಲಿ ಸದಸ್ಯ ಸ್ಥಾನಗಳಿಗೆ ಚುನಾವಣೆ ನಡೆಸಲಾಗಿರುತ್ತದೆ. ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಹುದ್ದೆಗಳಿಗೆ ಜನವರಿ-ಫೆಬ್ರುವರಿ 2021 ರಲ್ಲಿ ಚುನಾವಣೆ ನಡೆಸಿ ಆಯ್ಕೆ ಮಾಡಲಾಗಿದ್ದು, ಈ ಅವಧಿಯು ಜನವರಿ- ಫೆಬ್ರುವರಿ-ಮಾರ್ಚ್ 2026 ರವರೆಗೆ ಇರುತ್ತದೆ.

2) ಸರ್ಕಾರದ ಪತ್ರ ಸಂಖ್ಯೆ: RDPR 486 GPA 2025, ದಿನಾಂಕ:28-01-2026 ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರಡಿಯಲ್ಲಿ ಗ್ರಾಮ ಪಂಚಾಯತಿಗಳಿಗೆ 2026-31 ನೇ ಸಾಲಿನ ಗ್ರಾಮ ಪಂಚಾಯತಿಯ ಸಾರ್ವತ್ರಿಕ ಚುನಾವಣೆ ನಡೆಸಲು ಬೇಕಾಗಿರುವ ಎಲ್ಲಾ ಅಗತ್ಯ ಪೂರ್ವ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ.

## 4) ಪಕ್ಷದ ಚಿಹ್ನೆಯಡಿ ಚುನಾವಣೆ ನಡೆಸುವ ಬಗ್ಗೆ.

1) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ (ಚುನಾವಣೆಯನ್ನು ನಡೆಸುವ) ನಿಯಮಗಳು, 1993 ನಿಯಮ 20, 21 ಮತ್ತು 22 ರನ್ವಯ ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿಗಳಿಗೆ ಪಕ್ಷದ ಚಿಹ್ನೆಯ ಆಧಾರದ ಮೇಲೆ ಚುನಾವಣೆ ನಡೆಸಲಾಗುತ್ತಿದೆ.

2) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 4ರನ್ವಯ ಪ್ರತಿ 400 ಜನಸಂಖ್ಯೆಗೆ ಒಬ್ಬ ಸದಸ್ಯರನ್ನು ನಿಗಧಿಪಡಿಸಲು, ಪ್ರಕರಣ 5(5) ರನ್ವಯ ಗ್ರಾಮ ಪಂಚಾಯಿತಿಗೆ ಪ್ರತಿಯೊಂದು ಚುನಾವಣಾ ಕ್ಷೇತ್ರಕ್ಕೂ ಎಷ್ಟು ಸ್ಥಾನಗಳನ್ನು ಅಂದರೆ ಒಂದು ಅಥವಾ ಅದಕ್ಕೂ ಹೆಚ್ಚಿನ ಸ್ಥಾನಗಳನ್ನು ಹಂಚಿಕೆ ಮಾಡಬಹುದಾಗಿದೆ. ಪ್ರಕರಣ 7ರನ್ವಯ ಗ್ರಾಮ ಪಂಚಾಯಿತಿಗೆ ಚುನಾವಣೆಗಳನ್ನು ಪಕ್ಷದ ಆಧಾರ ರಹಿತವಾಗಿ ಮತದಾನದ ಮೂಲಕ ನಡೆಸಲು ಅವಕಾಶ ಕಲ್ಪಿಸಲಾಗಿದೆ.

3) ಗ್ರಾಮ ಪಂಚಾಯಿತಿಗಳಿಗೆ ಪಕ್ಷದ ಆಧಾರದ ಮೇಲೆ, ಏಕ ಚುನಾವಣಾ ಕ್ಷೇತ್ರ ನಿಗಧಿ ಮತ್ತು ಪ್ರತಿ 1000 ಜನಸಂಖ್ಯೆಗೆ ಒಬ್ಬ ಸದಸ್ಯರನ್ನು ನಿಗಧಿಪಡಿಸಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ಕ್ಕೆ ತಿದ್ದುಪಡಿ ತರುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

## 5) ಪಂಚಾಯತ್ ರಾಜ್ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳಿಗೆ ಗೌರವ ಧನ.

1) ಗ್ರಾಮ ಪಂಚಾಯತಿ ಅಧ್ಯಕ್ಷರಿಗೆ ರೂ.6000/- ಗಳು, ಉಪಾಧ್ಯಕ್ಷರಿಗೆ ರೂ.4000/- ಗಳು ಮತ್ತು ಸದಸ್ಯರಿಗೆ ರೂ.2000/- ಗೌರವಧನ ನೀಡಲಾಗುತ್ತಿದೆ.

2) ತಾಲ್ಲೂಕು ಪಂಚಾಯತಿ ಅಧ್ಯಕ್ಷರಿಗೆ ರೂ.6000/- ಗಳು, ಉಪಾಧ್ಯಕ್ಷರಿಗೆ ರೂ.4000/- ಗಳು ಮತ್ತು ಸದಸ್ಯರಿಗೆ ರೂ.3000/- ಗೌರವಧನ ನೀಡಲಾಗುತ್ತಿದೆ.

3) ಜಿಲ್ಲಾ ಪಂಚಾಯತಿ ಅಧ್ಯಕ್ಷರಿಗೆ ರೂ.35000/- ಗಳು, ಉಪಾಧ್ಯಕ್ಷರಿಗೆ ರೂ.15000/- ಗಳು ಮತ್ತು ಸದಸ್ಯರಿಗೆ ರೂ.5000/- ಗೌರವಧನ ನೀಡಲಾಗುತ್ತಿದೆ. ಜಿಲ್ಲಾ ಪಂಚಾಯತಿ ಅಧ್ಯಕ್ಷರಿಗೆ ರಾಜ್ಯ ಸಚಿವರ ಸ್ಥಾನಮಾನವನ್ನು ನೀಡಲಾಗಿದೆ. ಅಧ್ಯಕ್ಷರಿಗೆ ವೇತನ ಮತ್ತು ಭತ್ಯೆಗಳನ್ನು ನಿಯಮಾನುಸಾರ ಭರಿಸಲು ಅವಕಾಶ ಕಲ್ಪಿಸಲಾಗಿದೆ.

**6) <u>ಗ್ರಾಮ ಪಂಚಾಯತಿಗಳ ಸಿಬ್ಬಂದಿಗಳಿಗೆ 'ಸಿ' ಮತ್ತು 'ಡಿ' ದರ್ಜೆಯ ಸ್ಥಾನಮಾನ ನೀಡಿ ಇತರೆ ಸರ್ಕಾರಿ ಸೌಲಭ್ಯಗಳನ್ನು ನೀಡುವ ಬಗ್ಗೆ.</u>**

1) ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 886 ಗ್ರಾಪಂಕಾ 2016, ದಿನಾಂಕ:29-09-2020 ರಲ್ಲಿ ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಸೇವಾ ಷರತ್ತುಗಳು) ನಿಯಮಗಳು, 2020ನ್ನು ರಚಿಸಲಾಗಿದ್ದು, ನಿಯಮ 1(3)ರಲ್ಲಿ ಗ್ರಾಮ ಪಂಚಾಯಿತಿಗಳಲ್ಲಿ ನೇಮಕಗೊಂಡ ನೌಕರರನ್ನು ಸ್ಥಳೀಯ ಸಂಸ್ಥೆಯ ನೌಕರರೆಂದು ಪರಿಗಣಿಸಲು ಅವಕಾಶ ಕಲ್ಪಿಸಲಾಗಿದೆ. ಆದ್ದರಿಂದ, ಗ್ರಾಮ ಪಂಚಾಯಿತಿ ಸಿಬ್ಬಂದಿಗಳಿಗೆ 'ಸಿ' ಮತ್ತು 'ಡಿ' ದರ್ಜೆಯ ಸ್ಥಾನಮಾನ ನೀಡಿ ಇತರೆ ಸರ್ಕಾರಿ ಸೌಲಭ್ಯಗಳನ್ನು ನೀಡಲು ಅವಕಾಶವಿರುವುದಿಲ್ಲ.

2) ಆದಾಗ್ಯೂ ಕಾರ್ಮಿಕ ಇಲಾಖೆಯು ಗ್ರಾಮ ಪಂಚಾಯಿತಿ ನೌಕರರಿಗೆ ಕಾಲಕಾಲಕ್ಕೆ ನಿಗದಿಪಡಿಸುವ ಕನಿಷ್ಠ ವೇತನ ಮತ್ತು ವ್ಯತ್ಯಾಸವಾಗುವ ತುಟ್ಟಿಭತ್ಯೆ ನೀಡಲಾಗುತ್ತಿದೆ. ಪ್ರಸ್ತುತ 2025-26 ನೇ ಸಾಲಿಗೆ ನಿಗದಿಪಡಿಸಿರುವ ಕನಿಷ್ಠ ವೇತನ ಮತ್ತು ವ್ಯತ್ಯಾಸವಾಗುವ ತುಟ್ಟಿಭತ್ಯೆ ಈ ಕೆಳಕಂಡಂತಿದೆ.

**(ರೂ.ಗಳಲ್ಲಿ)**

| ಕ್ರ. ಸಂ | ಪದನಾಮ | ಕನಿಷ್ಠ ವೇತನ ನೀಡುತ್ತಿರುವ ವಿವರ | ವ್ಯತ್ಯಾಸವಾಗುವ ತುಟ್ಟಿಭತ್ಯೆ | ಒಟ್ಟು |
|---|---|---|---|---|
| 1 | ಬಿಲ್ ಕಲೆಕ್ಟರ್ | 15,196.72 | 2818.80 | 18,015.52 |
| 2 | ಕ್ಲರ್ಕ ಕಂ ಡಾಟಾ ಎಂಟ್ರಿ ಆಪರೇಟರ್ | 15,196.72 | 2818.80 | 18,015.52 |
| 3 | ವಾಟರ್ ಆಪರೇಟರ್ | 13,509.32 | 2818.80 | 16,328.12 |
| 4 | ಅಟೆಂಡಂಟ್ | 12,873.52 | 2818.80 | 15,692.32 |
| 5 | ಕ್ಲೀನರ್ಸ್ | 16,019.52 | 2818.80 | 18838.32 |

3) ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ 10 ದಿನಗಳ ಸಾಂದರ್ಭಿಕ ರಜೆ, 2 ದಿನಗಳ ನಿರ್ಬಂಧಿತ ರಜೆ, 30 ದಿನಗಳ ಗಳಿಕೆ ರಜೆ, ವಿವಾಹಿತ ಮಹಿಳೆಯರಿಗೆ 180 ದಿನಗಳ ಪ್ರಸೂತಿ ರಜೆ ಮತ್ತು ಪುರುಷ ನೌಕರರಿಗೆ 15 ದಿನಗಳ ಪಿತೃತ್ವ ರಜೆ ನೀಡಲಾಗುತ್ತಿದೆ.

4) ಗ್ರಾಮ ಪಂಚಾಯಿತಿ ಸಿಬ್ಬಂದಿಯು ಸೇವೆಯಲ್ಲಿದ್ದಾಗ ಮರಣ ಹೊಂದಿದಲ್ಲಿ ಅವರ ನ್ಯಾಯಬದ್ಧ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು, ಪ್ರಸ್ತುತ ಸೇವೆಯಿಂದ ನಿವೃತ್ತಿಯಾಗುವ ಗ್ರಾಮ ಪಂಚಾಯಿತಿ ಸಿಬ್ಬಂದಿಗೆ ಅಥವಾ ಸೇವೆಯಲ್ಲಿ ಮರಣ ಹೊಂದಿದ ಸಿಬ್ಬಂದಿಯ ನ್ಯಾಯಬದ್ಧ ಅವಲಂಬಿತರಿಗೆ ಅವರು ಸಲ್ಲಿಸಿದ ಸೇವಾ ಅವಧಿಯ ಆಧಾರದ ಮೇಲೆ ಒಂದು ವರ್ಷದ ಸೇವೆಗೆ 15 ದಿನಗಳ ವೇತನದಂತೆ ಸೇವಾ ಅವಧಿಯ ಗರಿಷ್ಠ 20 ತಿಂಗಳ ವೇತನ ಮೀರದಂತೆ ನಿವೃತ್ತಿ ಹಾಗೂ ಮರಣೋತ್ತರ ಉಪದಾನಗಳನ್ನು ನೀಡಲು ಮತ್ತು ಗ್ರಾಮ ಪಂಚಾಯತಿ ನೌಕರರು ಸೇವೆಯಲ್ಲಿರುವಾಗಲೇ ಮೃತರಾದರೆ ಅವರ ಅವಲಂಬಿತ ಕುಟುಂಬ ಸದಸ್ಯರಿಗೆ ಶವಸಂಸ್ಕಾರಕ್ಕೆ ರೂ.10.000/- ಗಳನ್ನು ಗ್ರಾಮ ಪಂಚಾಯತಿ ಸಂಪನ್ಮೂಲದಿಂದ ಭರಿಸಲು ಅವಕಾಶ ಕಲ್ಪಿಸಲಾಗಿದೆ.

5) ಗ್ರಾಮ ಪಂಚಾಯತಿ ಸಿಬ್ಬಂದಿ ವರ್ಗದವರಿಗೆ ಅನಿರೀಕ್ಷಿತ ಸಂದರ್ಭಗಳಲ್ಲಿ ಅಪಘಾತಗಳಾದಲ್ಲಿ ಅವರ ಅವಲಂಬಿತ ಕುಟುಂಬ ಸದಸ್ಯರಿಗೆ ಆರ್ಥಿಕ ಭದ್ರತೆ ಒದಗಿಸುವ ಹಿತದೃಷ್ಟಿಯಿಂದ ಪ್ರಧಾನ ಮಂತ್ರಿಯವರ "ಜನ್‌ಧನ್" ಯೋಜನೆಯಡಿಯ ವಿಮಾ ಪಾಲಿಸಿಗಳನ್ನು ಕಡ್ಡಾಯವಾಗಿ ಮಾಡಿಸಲು ಮತ್ತು ಗ್ರಾಮ ಪಂಚಾಯತಿ ನೌಕರರಿಗೆ ತೀವ್ರ ಸ್ವರೂಪದ ಕಾಯಿಲೆಗಳಾದ ಹೃದ್ರೋಗ ಶಸ್ತ್ರ ಚಿಕಿತ್ಸೆ, ಕ್ಯಾನ್ಸರ್, ಬೋನ್ ಮ್ಯಾರೋ ಟ್ರಾನ್ಸ್ ಪ್ಲಾಂಟ್, ಡಯಾಲಿಸಿಸ್ ಮತ್ತು ಮೂತ್ರಪಿಂಡ ಕಾಯಿಲೆಗಳಿಗೆ ತುತ್ತಾದಲ್ಲಿ ವೈದ್ಯಕೀಯ ವೆಚ್ಚ ಗರಿಷ್ಠ ರೂ. 50,000/- ಗಳನ್ನು ಭರಿಸಲು ಅವಕಾಶ ಕಲ್ಪಿಸಲಾಗಿದೆ.

ಸಂಖ್ಯೆ:RDPR 268 GPA 2026

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.